ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ನೂತನ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

---

ಸಂಖ್ಯೆ:ಸಿ1(1)ಇತರೆ.ಶಿ/ಅ. ಮೀಸಲಾತಿ (371 ಜೆ)62/2013-14 ದಿನಾಂಕ: 15-10-2015

**ಸುತ್ತೋಲೆ.**

ವಿಷಯ:-ಕರ್ನಾಟಕ ಸಾರ್ವಜನಿಕ ಉದ್ಯೋಗ(ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳಿಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು 2013ರಡಿಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ **"ರಾಜ್ಯ ಮಟ್ಟದ ಸ್ಥಳೀಯ ವೃಂದಕ್ಕೆ"** ಸೇರಲು ಇಚ್ಚಿಸುವ ನೌಕರರಿಂದ ಅರ್ಜಿಯನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ:-1.ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ 2012 ದಿ: 06.11.2013.

2.ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿ:29.01.2014

3.ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಸಿ1(1)ಇತರೆ ಶಿ/ಅ. ಮೀಸಲಾತಿ (371ಜೆ) 62/2013-14 ದಿನಾಂಕ:25.09.2014.

4.ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಸಿ1(1)ಇತರೆ ಶಿ/ಅ. ಮೀಸಲಾತಿ (371ಜೆ) 62/2013-14 ದಿನಾಂಕ:03-12-2014

5.ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ78 ಹೈಕಕೋ2014 ದಿನಾಂಕ: 22-05-2015.

6.ಈ ಕಚೇರಿ ಅಧಿಸೂಚನೆ ಸಂಖ್ಯೆ:ಸಿ1(1)ಇತರೆ ಶಿ/ಅ. ಮೀಸಲಾತಿ(371ಜೆ) 62/2013-14 ದಿನಾಂಕ: 04-09-2015.

7.ಸರ್ಕಾರದ ಅಧಿಸೂಚನೆ ಸಂಖ್ಯೆ: 43 ಹೆಚ್‌ಕೆಸಿ2013 ದಿನಾಂಕ:20-10-2014.

&&&&

ಕರ್ನಾಟಕ ಸಾರ್ವಜನಿಕ ಉದ್ಯೋಗ(ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013ರ ಅಧಿಸೂಚನೆಯ ಕಂಡಿಕೆ 2(ಐ) ಮತ್ತು ಕಂಡಿಕೆ 13ರ ಅನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ನೇಮಕಾತಿ ಪ್ರಾಧಿಕಾರದ ವ್ಯಾಪ್ತಿಯ ರಾಜ್ಯ ಮಟ್ಟದ ಕಛೇರಿಗಳಲ್ಲಿನ ಗ್ರೂಪ್ **ಬಿ**, ಸಿ ಮತ್ತು **ಡಿ** ಹುದ್ದೆಗಳಲ್ಲಿ ವೃಂದವಾರು ಹೈದ್ರಾಬಾದ್-ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಶೇ.8ರಷ್ಟು ಹುದ್ದೆಗಳನ್ನು ರಾಜ್ಯ ಮಟ್ಟದ ಸ್ಥಳೀಯ ವೃಂದಕ್ಕೆ ಮೀಸಲಿರಿಸಿ ಉಲ್ಲೇಖ-3ರಲ್ಲಿ ಅಧಿಸೂಚನೆ ಹೊರಡಿಸಲಾಗಿತ್ತು.

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳಿಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು, 2013ರ ಅಧ್ಯಾಯ 4ರ ನಿಯಮ 6ರಂತೆ ಸ್ಥಳಿಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಚಿಸುವ ನೌಕರರು ಅನುಬಂಧ-ಸಿ ಯಲ್ಲಿ ನಿರ್ದಿಷ್ಟಪಡಿಸಿದ ನಮೂನೆಯಲ್ಲಿ **45** ದಿನಗಳ ಒಳಗಾಗಿ ತಮ್ಮ ಆಯ್ಕೆಯನ್ನು ಚಲಾಯಿಸಲು ಉಲ್ಲೇಖ(4) ರ ಸುತ್ತೋಲೆಯಲ್ಲಿ ಅರ್ಜಿಯನ್ನು ಅಹ್ವಾನಿಸಲಾಗಿತ್ತು.

ಪ್ರಸ್ತುತ ಉಲ್ಲೇಖ (5) ರ ಸರ್ಕಾರದ ಸುತ್ತೋಲೆಯಲ್ಲಿ ನೀಡಿರುವ ಸ್ಪಷ್ಟೀಕರಣದಂತೆ ರಾಜ್ಯ ಮಟ್ಟದ ಕಚೇರಿ ಎಂದರೆ ರಾಜ್ಯಕ್ಕೆ ಸಮಗ್ರವಾಗಿ ಸೇವೆ ಸಲ್ಲಿಸುತ್ತಿರುವ ಅಥವಾ ರಾಜ್ಯದ ಸಮಗ್ರ ವಿಸ್ತಾರವಾದ ಅಧಿಕಾರ ವ್ಯಾಪ್ತಿಯ ಅಥವಾ ರಾಜ್ಯದ ರಾಜಧಾನಿ ಪ್ರದೇಶಕ್ಕೆ ಸೇವೆ ಸಲ್ಲಿಸುತ್ತಿರುವ ಕಚೇರಿ ಅಂದರೆ 'ಬೃಹತ್ ಬೆಂಗಳೂರು ಮಹಾನಗರ

ಪಾಲಿಕೆಯ' ವ್ಯಾಪ್ತಿಯಲ್ಲಿ ಬರುವಂತಹ ಕಚೇರಿಗಳಲ್ಲಿ ಶೇ **8** ಮೀಸಲು ನೀಡುವಂತೆ ಆದೇಶಿಸಲಾಗಿರುವ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಎಲ್ಲಾ ಕಚೇರಿಗಳಲ್ಲಿ ಲಭ್ಯವಿರುವ ಹುದ್ದೆಗಳಲ್ಲಿ ಶೇ.8 ರಷ್ಟು ಹುದ್ದೆಗಳನ್ನು ರಾಜ್ಯ ಮಟ್ಟದ ಸ್ಥಳೀಯ ವೃಂದಕ್ಕೆ ಸೇರಿಸಿ ಉಲ್ಲೇಖ (6) ರಲ್ಲಿ ಈ ಕಚೇರಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳಿಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು, 2013ರ ಅಧ್ಯಾಯ 4ರ ನಿಯಮ 6 ಮತ್ತು ಉಲ್ಲೇಖ (7) ರ ಸರ್ಕಾರದ ಅಧಿಸೂಚನೆಯಂತೆ ಸ್ಥಳಿಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಚಿಸುವ ನೌಕರರು **ಅನುಬಂಧ-ಸಿ** ಯಲ್ಲಿ ನಿರ್ದಿಷ್ಟಪಡಿಸಿದ ನಮೂನೆಯಲ್ಲಿ **45** ದಿನಗಳ ಒಳಗಾಗಿ ಅಯ್ಕೆಯನ್ನು ಚಲಾಯಿಸಲು ಅರ್ಜಿಯನ್ನು ಅಹ್ವಾನಿಸಲಾಗಿದೆ. ಅರ್ಹ ನೌಕರರು ಈ ಸುತ್ತೋಲೆಯ ದಿನಾಂಕದಿಂದ **45** ದಿನಗಳಲ್ಲಿ ತಮ್ಮ ಆಯ್ಕೆಯನ್ನು ಚಲಾಯಿಸಲು ತಿಳಿಸಿದೆ. ನೌಕರರು ನಿಗಧಿತ ಅವಧಿಯಲ್ಲಿ ಆಯ್ಕೆಯನ್ನು ಚಲಾಯಿಸದಿರುವ ಸಂದರ್ಭದಲ್ಲಿ ಸ್ಥಳೀಯ ವೃಂದವನ್ನು ಸೇರಲು ಇಚ್ಚೆ ಹೊಂದಿಲ್ಲವೆಂದು ಭಾವಿಸಲಾಗುವುದು.

20/X/15

(ಕೆ. ಎಸ್. ಸತ್ಯಮೂರ್ತಿ)
ಆಯುಕ್ತರು 15.10.15

**ಇವರಿಗೆ:-**

1. ಸ್ಥಳಿಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಚಿಸುವ ನೌಕರರು.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು.
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹ ನಿರ್ದೇಶಕರು.
4. ರಾಜ್ಯದ ಎಲ್ಲಾ ಸಿ.ಟಿ.ಇ. ಪ್ರಾಂಶುಪಾಲರು.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ).
6. ರಾಜ್ಯದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪ ನಿರ್ದೇಶಕರು (ಅಭಿವೃದ್ಧಿ).
7. ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
8. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢ ಶಾಲೆ/ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಮುಖ್ಯಸ್ಥರಿಗೆ. (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).

**ಪ್ರತಿಗಳು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಹೈದರಾಬಾದ್ -ಕರ್ನಾಟಕ ವಿಶೇಷ ಕೋಶ, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ.
6. ರಾಜ್ಯ ಯೋಜನಾ ನಿರ್ದೇಶಕರು, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಹಿರಿಯ ಸಹಾಯಕ ನಿರ್ದೇಶಕರು, ಇ ಆಡಳಿತ ಘಟಕ, (ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
10. ಕಛೇರಿ ಪ್ರತಿ.